ಅ) ರಾಜ್ಯದಲ್ಲಿ ರೇಷ್ಮೆ ಗೂಡಿನ ಬೆಲೆ ಕಡಿಮೆಯಾಗಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು.

ಇ) ರೇಷ್ಮೆ ಬೆಳೆ ಮತ್ತು ರೇಷ್ಮೆ ಗೂಡಿಗೆ ಬೆಂಬಲ ಬೆಲೆಯನ್ನು ನಿಗದಿಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ

ಈ) ಇದ್ದಲ್ಲಿ ಇದನ್ನು ಎಂದಿನಿಂದ ಜಾರಿಗೆ ತರಲಾಗುವುದು ವಿವರಗಳನ್ನು ನೀಡುವುದು?

ಶ್ರೀ ಹೆಚ್.ಎಂ. ರೇವಣ್ಣ (ರೇಷ್ಮೆ ಮತ್ತು ಜವಳಿ ಸಚಿವರು)

1. ರೇಷ್ಮೆ ಆಮದು ಸುಂಕವನ್ನು ಹೆಚ್ಚಿಸಲು ಮತ್ತು ನೆರೆ ರಾಷ್ಟ್ರಗಳಾದ ಬಾಂಗ್ಲಾದೇಶ ಮತ್ತು ನೇಪಾಳಗಳ ಮೂಲಕ ಕಳ್ಳ ಸಾಗಾಣಿಕೆಯಿಂದ ಅನಧಿಕೃತವಾಗಿ ಬರುತ್ತಿರುವ ರೇಷ್ಮೆಯನ್ನು ತಡೆಗಟ್ಟಲು ಕೇಂದ್ರ ಸರ್ಕಾರವನ್ನು ಕೋರಲಾಗಿದೆ. ಇದಲ್ಲದೆ ರಷ್ತ ಮಾಡುವ ಜವಳಿಗೆ ಬೇಕಾಗುವ ಗುಣಮಟ್ಟದ ಮತ್ತು ಪ್ರಮಾಣದ ರೇಷ್ಮೆಯನ್ನು ಮಾತ್ರ ಆಮದು ಮಾಡುವಂತೆ ಕೇಂದ್ರ ಸರ್ಕಾರವನ್ನು ಕೋರಲಾಗಿದೆ.

2. ರೇಷ್ಮೆಗೆ ಬೆಂಬಲ ನೀಡುವ ಬಗ್ಗೆ ಸಮಿತಿ ರಚಿಸಲಾಗಿದ್ದು ಸಮಿತಿಯು ವರದಿಯನ್ನು ಸಲ್ಲಿಸಿದ್ದು, ಅದು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

3. ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ಮತ್ತು ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ಇವು ಕಚ್ಚಾ ರೇಷ್ಮೆ ಮತ್ತು ರೇಷ್ಮೆ ಗೂಡನ್ನು ಹೆಚ್ಚಾಗಿ ಖರೀದಿಸಲು ಅನುಕೂಲವಾಗುವಂತೆ ಕಡಿಮೆ ಬಡ್ಡಿ ದರದಲ್ಲಿ ಸಾಲ ಒದಗಿಸಲು ಪರಿಶೀಲಿಸಲಾಗುತ್ತಿದೆ.

4. ಹೊಸ ತಾಂತ್ರಿಕತೆಗಳ ಅಳವಡಿಕೆ, ಹೊಸ ಹಿಪ್ಪನೇರಳೆ ತಳಿ ಮತ್ತು ಹೊಸ ರೇಷ್ಮೆ ಹುಳುವಿನ ತಳಿಗಳನ್ನು ಬಳಸಿ ಗುಣಮಟ್ಟದ ಗೂಡು ಉತ್ಪಾದಿಸಿ ಉತ್ಪಾದನಾ ವೆಚ್ಚ ಕಡಿಮೆ ಮಾಡಿ ಉತ್ಪಾದಕತೆ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ. ರೇಷ್ಮೆಗೆ ಬೆಂಬಲ ಬೆಲೆ ನೀಡುವ ಬಗ್ಗೆ ಸಮಿತಿ ರಚಿಸಲಾಗಿದ್ದು, ಸಮಿತಿಯು ವರದಿಯನ್ನು ಸಲ್ಲಿಸಿದ್ದು, ಅದು ಸರ್ಕಾರದ ಪರಿಶೀಲನೆಯಲ್ಲಿದೆ.

ಈ. ವರದಿಯು ಸರ್ಕಾರದ ಪರಿಶೀಲನೆಯಲ್ಲಿದ್ದು ಅದಷ್ಟು ಶೀಘ್ರವಾಗಿ ಜಾರಿಗೆ ತರಲಾಗುವುದು.

ಪರಿಶಿಷ್ಟ ಜಾತಿ:ವರ್ಗದ ಬ್ಯಾಕ್‌ಲಾಗ್ ಹುದ್ದೆ ತುಂಬುವ ಬಗ್ಗೆ

650(822) ಶ್ರೀ ಬಿ. ಸೋಮಶೇಖರ್ (ಮಳವಳ್ಳಿ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರದ ಪೂರ್ಣ ಅನುದಾನಿತ ಸಂಖ್ಯೆಗಳಲ್ಲಿ ಒಂದಾಗಿರುವ ಬೆಂಗಳೂರಿನ ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆಯ ಅಧ್ಯಯನ ಸಂಸ್ಥೆ ಸರ್ಕಾರದ ನೀತಿಯ ಪ್ರಕಾರ ಪರಿಶಿಷ್ಟ ಜಾತಿ ವರ್ಗದವರಿಗೆ ಎಲ್ಲಾ ಶ್ರೇಣಿಗಳಲ್ಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆ ಎಷ್ಟು?

ಆ) ಈ ಹುದ್ದೆಗಳನ್ನು ತುಂಬಲು ಪ್ರಕಟಣೆಯನ್ನು ಹೊರಡಿಸಲಾಗಿದೆಯೆ? ಇಲ್ಲದಿದ್ದರೆ ಸರ್ಕಾರ ಕಾನೂನಿನ ರೀತ್ಯ ತೆಗೆದುಕೊಳ್ಳುವ ಕ್ರಮವೇನು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು)

ಅ) ಆರು

ಆ) ಇಲ್ಲ, ಸರ್ಕಾರದ ನೀತಿಯಂತೆ ಗುರ್ತಿಸಲ್ಪಡುವ ಎಲ್ಲಾ ಬ್ಯಾಕ್‌ಲಾಗ್ ಹುದ್ದೆಗಳನ್ನು ದಿನಾಂಕ: 31.12.2002ರೊಳಗೆ ಪ್ರಕಟಣೆ ಹೊರಡಿಸಿ, ವಿಶೇಷ ನೇಮಕಾತಿ ನಿಯಮಾವಳಿಯಡಿ ಭರ್ತಿ ಮಾಡುವಂತೆ ಸಂಸ್ಥೆಗೆ ತಿಳಿಸಲಾಗಿದೆ. ಇದನ್ನು ಉಲ್ಲಂಘಿಸಿದಲ್ಲಿ ಕರ್ನಾಟಕ ಪರಿಶಿಷ್ಟ ಜಾತಿ:ಪರಿಶಿಷ್ಟ ವರ್ಗದ ಹಾಗೂ ಹಿಂದುಳಿದ ವರ್ಗಗಳ (ನೇಮಕಾತಿ ಮತ್ತು ಮಿಸಲಾತಿ ತಿದ್ದುಪಡಿ ನಿಯಮ 2000ರಲ್ಲಿನ ನಿಯಮ 10(4) ಪ್ರಕಾರ ಶಿಕ್ಷೆಗೆ ಗುರುಪಡಿಸಲಾಗುವುದು ಮತ್ತು ಈ ಸಂಸ್ಥೆಗೆ ಸರ್ಕಾರದಿಂದ ನೀಡುವ ಅನುದಾನವನ್ನು ತಡೆಹಿಡಿಯಲು ಕ್ರಮಕೈಗೊಳ್ಳಲಾಗುವುದು.

ರಾಜ್ಯದಲ್ಲಿ ರೇಷ್ಮೆ ಗೂಡಿನ ಬೆಲೆ ಕುಸಿತ

651(398) ಶ್ರೀ ಶ್ರೀನಿವಾಸ ಗೌಡ ಕುದುವನಹಳ್ಳಿ .ಕೆ (ಕೋಲಾರ) ಮಾನ್ಯ ರೇಷ್ಮೆ ಮತ್ತು ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ರೇಷ್ಮೆ ಗೂಡಿನ ಬೆಲೆ ಒಂದು ಕೆ.ಜಿ.ಗೆ ರೂ.50-00ಕ್ಕೆ ಇಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಬಂದಿದ್ದಲ್ಲಿ, ರೈತರಿಗೆ ಪರಿಹಾರವಾಗಿ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೇಷ್ಮೆ ಗೂಡುಗಳನ್ನು ಖರೀದಿಸಲು ಕ್ರಮ ಕೈಗೊಳ್ಳಲಾಗಿದೆಯೇ;

ಇ) ಕ್ರಮ ಕೈಗೊಂಡಿದ್ದಲ್ಲಿ ಈ ಯೋಜನೆಗೆ ಎಷ್ಟು ಹಣ ಮೀಸಲಿಡಲಾಗಿದೆ?

ಶ್ರೀ ಹೆಚ್.ಎಂ. ರೇವಣ್ಣ (ರೇಷ್ಮೆ ಮತ್ತು ಜವಳಿ ಸಚಿವರು)

ಅ) ಕಳೆದ ವರ್ಷಕ್ಕೆ ಹೋಲಿಸಿದಾಗ ರೇಷ್ಮೆ ಗೂಡಿನ ಬೆಲೆ ಕಡಿಮೆಯಾಗಿದೆ. ಈಗ ಸರಾಸರಿ ಬೆಲೆ ಕೆ.ಜಿ.ಗೆ ರೂ. 85-90 ಇದೆ.

ಆ) ರೇಷ್ಮೆಗೆ ಬೆಂಬಲ ಬೆಲೆ ನೀಡುವ ಬಗ್ಗೆ ಸಮಿತಿ ರಚಿಸಲಾಗಿದ್ದು, ಸಮಿತಿಯು ವರದಿಯನ್ನು ಸಲ್ಲಿಸಿದ್ದು, ಅದು ಸರ್ಕಾರದ ತೀವ್ರ ಪರಿಶೀಲನೆಯಲ್ಲಿರುತ್ತದೆ.

ಇ) ಬೆಂಬಲ ಬೆಲೆ ನೀಡುವ ಬಗ್ಗೆ ಸರ್ಕಾರವು ಪರಿಶೀಲಿಸುತ್ತಿದೆ. ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮಕ್ಕೆ ಕೇಂದ್ರ ರೇಷ್ಮೆ ಮಂಡಳಿಯಿಂದ ರೂ. 3.00 ಕೋಟಿ ಸಾಲ ಮತ್ತು ಕರ್ನಾಟಕ ರೇಷ್ಮೆ ಮಾರಾಟ ಮಂಡಳಿಗೆ ರಾಜ್ಯ ಸರ್ಕಾರದಿಂದ ರೂ. 5.00 ಕೋಟಿ ಷೇರು ಬಂಡವಾಳ ಒದಗಿಸುವ ವಿಚಾರ ಪರಿಶೀಲನೆಯಲ್ಲಿದೆ.

ಸರ್ಕಾರಿ ಇಲಾಖೆಯಲ್ಲಿ ನೇಮಕಾತಿ

654(1132) ಶ್ರೀ ಕೆ.ಎಸ್. ಸುಬ್ಬಾರೆಡ್ಡಿ (ಬಸವನಗುಡಿ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?